## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 865
2. ಸದಸ್ಯರ ಹೆಸರು : ಡಾ: ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 13.03.2025
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪೊಲೀಸ್ ಠಾಣೆಗಳಿಗೆ ಸಾರ್ವಜನಿಕರು ದೂರು ನೀಡಲು ಹೋದಾಗ ಪೊಲೀಸರು ಸೌಜನ್ಯದಿಂದ ವರ್ತಿಸದೆ ಭಯದ ವಾತಾವರಣ ನಿರ್ಮಾಣವಾಗುವಂತೆ ವರ್ತಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ. |
| ಆ) | ಪೊಲೀಸ್ ಠಾಣೆಗಳಿಗೆ ಸಾರ್ವಜನಿಕರು ಭೇಟಿ ನೀಡಿದಾಗ ಸೌಜನ್ಯದಿಂದ ಮಾತನಾಡಿಸಿ ಗೌರವಯುತವಾಗಿ ಮಾನವೀಯತೆಯಿಂದ ವರ್ತಿಸುವಂತೆ ಸಿಬ್ಬಂದಿ ವರ್ಗದವರಿಗೆ ನಿರ್ದೇಶನ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೆ; | ಈಗಾಗಲೇ ಪೊಲೀಸರು ಸಾರ್ವಜನಿಕರ ಜೊತೆ ಸೌಜನ್ಯದಿಂದ ವರ್ತಿಸುವಂತೆ ಅನೇಕ ಸುತ್ತೋಲೆಗಳನ್ನು ಹೊರಡಿಸಿ ಸದರಿ ಸೂಚನೆಗಳನ್ನು ಪೊಲೀಸ್ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿ ವರ್ಗದವರಿಗೆ ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ ಹಾಗೂ ತಿಳುವಳಿಕೆಯನ್ನೂ ಸಹ ನೀಡಲಾಗಿರುತ್ತದೆ. ಈ ಬಗ್ಗೆ ಠಾಣೆಗಳಲ್ಲಿ ಸಾರ್ವಜನಿಕರು ಕಾಣಿಸಬಹುದಾದ ಸ್ಥಳಗಳಲ್ಲಿ ಸಿ.ಸಿ ಕ್ಯಾಮರಾಗಳನ್ನು ಅಳವಡಿಸಿ ಮಾನಿಟರಿಂಗ್ ಮಾಡಲಾಗುತ್ತಿದೆ. |
| ಇ) | ಹಿರಿಯ ಪೊಲೀಸ್ ಅಧಿಕಾರಿಗಳು ಪೊಲೀಸ್ ಠಾಣೆಗಳಿಗೆ ಭೇಟಿ ನೀಡಿ ಪೊಲೀಸ್ ಸಿಬ್ಬಂದಿಯ ವರ್ತನೆಯನ್ನು ಗಮನಿಸಿ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದೆ; | ಹಿರಿಯ ಪೊಲೀಸ್ ಅಧಿಕಾರಿಗಳು ಪೊಲೀಸ್ ಠಾಣೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಪೊಲೀಸ್ ಸಿಬ್ಬಂದಿಯ ವರ್ತನೆಯನ್ನು ಗಮನಿಸಿ ಸಾರ್ವಜನಿಕರೊಡನೆ ಸೌಜನ್ಯ ಹಾಗೂ ಗೌರವದಿಂದ ವರ್ತಿಸದಿದ್ದಲ್ಲಿ ಅವರು ಎಸಗಿದ ಆರೋಪಗಳ ಗಂಭೀರತೆಯನ್ನಾಧರಿಸಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಸಕ್ಷಮ ಪ್ರಾಧಿಕಾರಿಗಳು ಸೂಕ್ತ ಇಲಾಖಾ ಶಿಸ್ತು ಕ್ರಮ ಜರುಗಿಸಲಾಗುತ್ತಿದೆ. |
| ಈ) | ಪೊಲೀಸ್‌ರ ಕರ್ತವ್ಯದ ಬಗ್ಗೆ ಸಲಹೆ ಸೂಚನೆ ನೀಡಲು ತರಬೇತಿ ಶಿಬಿರಗಳನ್ನು ಏರ್ಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದೆ? | ಪೊಲೀಸ್ ಅಧಿಕಾರಿ/ಸಿಬ್ಬಂದಿಗಳಿಗೆ ಬುನಾದಿ ತರಬೇತಿ (Basic Training), ಪುನಃಶ್ಚೇತನ ತರಬೇತಿ (Refresher Courses), ಪುನರ್ ಮನನ ತರಬೇತಿ (Post Promotional Training) ಹಾಗೂ ಅಲ್ಪಾವಧಿ ವಿಷಯಾಧಾರಿತ ತರಬೇತಿಗಳಲ್ಲಿ ಪೊಲೀಸರ ಕರ್ತವ್ಯಗಳ ಬಗ್ಗೆ ಸಲಹೆ ಸೂಚನೆಗಳನ್ನು ನೀಡಲಾಗುತ್ತಿದೆ. |

ಹೆಚ್‌ಡಿ 70 ಪಿಪಿಎಸ್ 2025

(ಡಾ: ಜಿ.ಪರಮೇಶ್ವರ )
ಗೃಹ ಸಚಿವರು